934 ಶ್ರೀ ಪಾಟೀಲ್ ಬಿ.ಸಿ. (ಹಿರೇಕೆರೂರು) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಈವರೆಗೂ ಎಷ್ಟು ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗಿದೆ; ಬಾಕಿ ಉಳಿದಿರುವ ಆರೋಗ್ಯ ಕೇಂದ್ರಗಳೆಷ್ಟು; ಹಾಗೂ ಅವುಗಳನ್ನು ಮೇಲ್ದರ್ಜೆಗೇರಿಸುವ ವಿಷಯ ಸರ್ಕಾರದ ಮುಂದೆ ಇದೆಯೇ;

ಆ) ರಾಜ್ಯದಲ್ಲಿ ಈವರೆಗೂ ಖಾಲಿ ಇರುವ ವೈದ್ಯರ ಸಂಖ್ಯೆ ಎಷ್ಟು ಹಾಗೂ ಆರೋಗ್ಯ ಕೇಂದ್ರಗಳಲ್ಲಿ ಈಗಾಗಲೇ ಹಲವಾರು ವೈದ್ಯರ ಹುದ್ದೆಗಳು ಖಾಲಿ ಇದ್ದು, ಇವುಗಳನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ರಾಜ್ಯದಲ್ಲಿ ಒಟ್ಟು 325 ಸಮುದಾಯ ಆರೋಗ್ಯ ಕೇಂದ್ರಗಳಿದ್ದು, ಅವೆಲ್ಲವೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಿದಂತವುಗಳಾಗಿವೆ. ಅವುಗಳಲ್ಲಿ 146 ತಾಲ್ಲೂಕು ಮಟ್ಟದ ಆಸ್ಪತ್ರೆಗಳು ಸಹ ಒಳಗೊಂಡಿವೆ.

ಆ) ರಾಜ್ಯದಲ್ಲಿ ಇಲ್ಲಿಯವರೆಗೆ 1288 ವಿವಿಧ ವೃಂದದ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುತ್ತವೆ.

ತಜ್ಞ ವೈದ್ಯರ ಸೇವೆಯನ್ನು ಸಮಾಲೋಚನೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ಇದಕ್ಕಾಗಿ ಎನ್.ಆರ್.ಹೆಚ್.ಎಂ. ಯೋಜನೆಯಡಿ ರೂ. 25,000 ದಿಂದ ಗರಿಷ್ಟ ರೂ. 50,000 ರವರೆಗೆ ಮಾಸಿಕ ಗೌರವಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 2008–09ನೇ ಸಾಲಿನಲ್ಲಿ 815 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ನೇಮಕಗೊಂಡಿದ್ದು, ಆ ಪೈಕಿ 685 ವೈದ್ಯರು ಕಾರ್ಯವರದಿ ಮಾಡಿಕೊಂಡರು. 130 ವೈದ್ಯರು ಕಾರ್ಯ ವರದಿ ಮಾಡಿಕೊಳ್ಳಲಿಲ್ಲ. ಒಟ್ಟಾರೆ 182 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಪ್ರಸ್ತುತ ಖಾಲಿ ಇದ್ದು, ಈ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

1173 ಶ್ರೀ ರಹೀಮ ಖಾನ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್‌ನಲ್ಲಿರುವ ವೈದ್ಯಕೀಯ ಮಹಾವಿದ್ಯಾಲಯವು ಪಾಲಿಟೆಕ್ನಿಕ್‌ನ ಸ್ವಾಧೀನಾನುಭವದಲ್ಲಿರುವ ಸ್ಥಳದಲ್ಲಿ ಕಟ್ಟಡವನ್ನು ನಿರ್ಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದರಿಂದ ವಿದ್ಯಾರ್ಥಿಗಳಿಗೆ ತುಂಬಾ ಅನಾನುಕೂಲವಾಗುತ್ತಿದ್ದು, ಸಿಬ್ಬಂದಿಗಳ ಕೊರತೆಯು ಬಹಳಷ್ಟು ಇದ್ದು, ಕೆಲಸ ಕಾರ್ಯಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬೀದರ್‌ನ ವೈದ್ಯಕೀಯ ಮಹಾವಿದ್ಯಾಲಯವನ್ನು ಸ್ವಂತ ಸ್ಥಳದಲ್ಲಿ ನಿರ್ಮಿಸಿ ಸಿಬ್ಬಂದಿಗಳ ಕೊರತೆಯನ್ನು ನಿವಾರಿಸಿ ಅನುಕೂಲ ಮಾಡಿಕೊಡುವುದು ಯಾವಾಗ?

ಶ್ರೀ ರಾಮಚಂದ್ರಗೌಡ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಭಾರತೀಯ ವೈದ್ಯಕೀಯ ಪರಿಷತ್ತಿನ ನಿಯಮಾವಳಿ ಪ್ರಕಾರ ಒಂದೇ ಜಾಗದಲ್ಲಿ 25 ಎಕರೆ ಜಮೀನು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಇರುವುದು ಕಡ್ಡಾಯವಾಗಿರುವುದರಿಂದ ಸರ್ಕಾರಿ ಪಾಲಿಟೆಕ್ನಿಕ್‌ನ್ನು ಬೇರೆಡೆಗೆ ಸ್ಥಳಾಂತರಿಸಲು ಆದೇಶಿಸಲಾಗಿದೆ.

ಆ) ಇಲ್ಲ.

ಇ) ಸ್ವಂತ ಸ್ಥಳದಲ್ಲೇ ನಿರ್ಮಿಸಿದ್ದು ಕಾರ್ಯನಿರ್ವಹಿಸುತ್ತಿದೆ.

ಮೊರಾರ್ಜಿ ದೇಸಾಯಿ ವಸತಿ ನಿಲಯ ಮತ್ತು ಶಾಲೆಗಳು

1174 ಶ್ರೀ ರಹೀಮ ಖಾನ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ವಿಧಾನಸಭಾ ಕ್ಷೇತ್ರದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಮತ್ತು ಶಾಲೆಗಳು ಕಡಿಮೆ ಇದ್ದು ಈ ಕ್ಷೇತ್ರಕ್ಕೆ ಈಗಿರುವ ಶಾಲೆಗಳು ಸಾಲುವುದಿಲ್ಲವೆಂಬ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇವುಗಳ ಸಂಖ್ಯೆಯನ್ನು ಹೆಚ್ಚಿಗೆ ಮಾಡುವುದಕ್ಕೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದೇ;

ಆ) ಬೀದರ್ ವಿಧಾನಸಭಾ ಕ್ಷೇತ್ರದಲ್ಲಿ ಅಲ್ಪಸಂಖ್ಯಾತರಿಗಾಗಿ ಒಂದು ಮೊರಾರ್ಜಿ ದೇಸಾಯಿ ವಸತಿ ಶಾಲೆ ಅವಶ್ಯವಿದ್ದು, ಪ್ರಸಕ್ತ ಸಾಲಿನಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ನಿರ್ಮಿಸಿಕೊಡಲಾಗುವುದೇ?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು):

ಅ) ಬೀದರ್ ವಿಧಾನ ಸಭಾ ಕ್ಷೇತ್ರದ ನಯಾಕಮಾನ್ ಪ್ರದೇಶದಲ್ಲಿ ಒಂದು ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ನಡೆಸಲಾಗುತ್ತಿದ್ದು, 100 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ.